329 (326) ಶ್ರೀ ಧ್ರುವನಾರಾಯಣ್ ಆರ್ (ಸಂತೇಮರಳ್ಳಿ) ಸಹಕಾರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರ ಸಾಲವನ್ನು ಮನ್ನಾ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಜಿ ಟಿ ದೇವೇಗೌಡ (ಸಹಕಾರ ಸಚಿವರು) .

ಅ) ಮತ್ತು ಆ) ಸಹಕಾರ ಸಂಸ್ಥೆಗಳು ರೈತರಿಗೆ ನೀಡಿರುವ ಕೃಷಿ ಸಾಲಗಳನ್ನು ಮನ್ನಾ ಮಾಡುವ ಪ್ರಸ್ತಾವವು ಸರ್ಕಾರದ ಪರಿಶೀಲನೆಯಲಲಿ ಬರುತ್ತದೆ

330 (327) ಶ್ರೀ ಧ್ರುವನಾರಾಯಣ್ ಆರ್ (ಸಂತೇಮರಳ್ಳಿ) ಮಾನ್ಯ ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾನೂನು ಬಾಹಿರವಾಗಿ ವಾಹನಗಳಲ್ಲಿ ಅಧಿಕ ಭಾರ ಹಾಕಿ ವಾಹನ ಸಂಚಾರ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಇದರ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು,

ಇ) ಅಧಿಕ ಭಾರದ ವಾಹನ ಚಾಲನೆಯಿಂದ ರಸ್ತೆಗಳು ಹಾಳಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಎನ್ ಚಲುವನಾರಾಯಣಸ್ವಾಮಿ (ಸಾರಿಗೆ ಸಚಿವರು)

ಅ) ಬಂದಿದೆ

ಆ) ಸಾರಿಗೆ ಇಲಾಖೆಯು ಅಧಿಕ ಭಾರದ ಸರಕು ಸಾಗಿಸುವ ವಾಹನಗಳನ್ನು ತಪಾಸಣೆ ನಡೆಸಿ, ತಪ್ಪಿತಸ್ಥ ಚಾಲಕರ ಮಾಲೀಕರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲ ಪ್ರಾದೇಶಿಕ /ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಕಾಲ ಕಾಲಕ್ಕೆ ಸುತ್ತೋಲೆಗಳನ್ನು ನೀಡಿ ಸೂಚಿಸಲಾಗಿರುತ್ತದೆ

ಇ) ಸಾರಿಗೆ ಇಲಾಖೆಯು ಅಧಿಕ ಭಾರದ ವಾಹನ ಚಾಲನೆಯಿಂದ ರಸ್ತೆಗಳು ಹಾಳಾಗುತ್ತಿರುವುದನ್ನು ತಡೆಗಟ್ಟಲು ನಿರಂತರವಾಗಿ ತನಿಖಾ ಕಾರ್ಯಗಳನ್ನು ಕೈಗೊಳ್ಳುವುದರ ಜೊತೆಗೆ ವಿಶೇಷ ತನಿಖಾ ತಂಡಗಳನ್ನು